ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

E-Waste ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

1006 (1216) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರತಿ ವರ್ಷ ಉತ್ಪನ್ನವಾಗುವ E-Waste ಎಷ್ಟು; (ಕಳೆದ 3 ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರವು ರಾಜ್ಯದಲ್ಲಿ ಮುಂಬರುವ ದಿನಗಳಲ್ಲಿ ಅಂದರೆ ಮುಂದಿನ 10 ವರ್ಷಗಳಲ್ಲಿ ಉತ್ಪಾದನೆ ಆಗುವ E-Waste ಎಷ್ಟು ಎಂದು ಅಂದಾಜಿಸಿದೆಯೇ; ವಿವಿಧ ರೀತಿಯ ಉತ್ಪನ್ನವಾದ E-Waste ಸಂಪೂರ್ಣ ಮಾಹಿತಿ ನೀಡುವುದು;

(ಇ) ರಾಜ್ಯದಲ್ಲಿ E-Wasteಗೆ ಸಂಬಂಧಿಸಿದಂತೆ ನಿರ್ವಹಣೆ ಮಾಡಲು ಒಂದು ಕಾರ್ಖಾನೆಯನ್ನು ಸ್ಥಾಪಿಸುವ ಉದ್ದೇಶವಿದೆಯೇ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಈ) ರಾಜ್ಯ ಸರ್ಕಾರವು ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಯ ಮುಖೇನ ಉತ್ಪನ್ನವಾದ E-Waste ನ್ನು ಉಪಯುಕ್ತವಾಗಿ ಬಳಸಲು ಯಾವುದಾದರೂ ಯೋಜನೆಯನ್ನು ರೂಪಿಸುವ ಚಿಂತನೆ ಇದೆಯೇ; ಇದ್ದಲ್ಲಿ, ಪೂರ್ಣ ಮಾಹಿತಿ ನೀಡುವುದು;

(ಉ) ರಾಜ್ಯದಲ್ಲಿ ಪ್ರತಿ ವರ್ಷವೂ ಉತ್ಪನ್ನವಾಗುತ್ತಿರುವ E-Waste ನ್ನು ಶೇಖರಿಸುವ Dumping Yard ಗಳನ್ನು ಗುರುತಿಸಲಾಗಿದೆಯೇ;

(ಊ) ರಾಜ್ಯದಲ್ಲಿ ಪ್ರತಿ ವರ್ಷ ಉತ್ಪತ್ತಿಯಾಗುವ E-Wasteನಲ್ಲಿ ಎಷ್ಟು ಪ್ರಮಾಣದ E-Wasteಗಳನ್ನು ಮರುಬಳಕೆಗೆ ಬಳಸಲಾಗುತ್ತಿದೆ ಮತ್ತು ಎಷ್ಟು ಪ್ರಮಾಣದ E-Wasteಅನ್ನು Dumping Yardನಲ್ಲಿ ಹಾಕಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಋ) ರಾಜ್ಯ ಸರ್ಕಾರವು E-Waste ನಿರ್ವಹಣೆಗೆ ಗ್ರಾಮ ಪಂಚಾಯಿತಿ ಮಟ್ಟದಿಂದ ಮಹಾನಗರ ಪಾಲಿಕೆವರೆಗಿನ ಸಂಬಂಧಪಟ್ಟ ಅಧಿಕಾರಿಗಳಿಗೆ ಮತ್ತು ಚುನಾಯಿತ ಪ್ರತಿನಿಧಿಗಳಿಗೆ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಚಿಂತನೆಯಲ್ಲಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)